ಶ್ರೀ ಎಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

1) ಸಾಮಾನ್ಯ ವರ್ಗಾವಣೆ ಇಲ್ಲದಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

2 ಮತ್ತು 3) ಸುವ್ಯವಸ್ಥಿತ ಶೈಕ್ಷಣಿಕ ಆಡಳಿತ ದೃಷ್ಟಿಯಿಂದ ಜಿಲ್ಲೆಯನ್ನು ವಿಭಜನೆ ಮಾಡಲಾಗಿತ್ತೇ ವಿನಃ ಇದರಿಂದ ಶಿಕ್ಷಕರನ್ನು ವರ್ಗಾಯಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈಗಾಗಲೇ ಶಾಲೆಗಳು ಪ್ರಾರಂಭವಾಗಿರುವುದರಿಂದ ವರ್ಗಾವಣೆಯನ್ನು ಸ್ಥಗಿತಗೊಳಿಸಲಾಗಿದೆ.

ಬೈಂದೂರು ಸರ್ಕಾರಿ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ.

1798(1874)

ಶ್ರೀ ಗೋಪಾಲ ಪೂಜಾರಿ ಕೆ.(ಬೈಂದೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕು ಬೈಂದೂರಿನಲ್ಲಿ ಸರ್ಕಾರಿ ಕಾಲೇಜು ಇರುವುದು ಸರ್ಕಾರದ ಗಮನದಲ್ಲಿದೆಯೇ?

ಆ) ಹಾಗಿದ್ದಲ್ಲಿ, ಈ ಕಾಲೇಜಿಗ ಉಪನ್ಯಾಸಕರ ನೇಮಕಾತಿ ಮಾಡದಿರಲು ಕಾರಣಗಳೇನು?

ಇ) ಯಾವ ಯಾವ ವಿಷಯಗಳಲ್ಲಿ ಉಪನ್ಯಾಸಕರ ಕೊರತೆಯಿದೆ? ವಿವರ ನೀಡುವುದು.

ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು):

ಅ) ಬೈಂದೂರಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು 1983ರಲ್ಲಿ ಪ್ರಾರಂಭವಾಗಿರುತ್ತದೆ.

ಆ) ಇತರೆ ಕಾಲೇಜುಗಳಲ್ಲಿ ಕಾರ್ಯಭಾರದ ಕೊರತೆಯಿಂದ ಹೆಚ್ಚುವರಿಯಾಗಿರುವ ಉಪನ್ಯಾಸಕರುಗಳನ್ನು ವರ್ಗಾಯಿಸುವ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ರಾಜ್ಯಶಾಸ್ತ್ರ ವಿಷಯದಲ್ಲಿ ಉಪನ್ಯಾಸಕರ ಕೊರತೆ ಇದೆ.

ಬೈಂದೂರು ವಿಧಾನಸಭಾ ಕ್ಷೇತ್ರಕ್ಕೆ ಪ್ರೌಢಶಾಲೆ ಮಂಜೂರಾತಿ.

1799(1875)

ಶ್ರೀ ಗೋಪಾಲ ಪೂಜಾರಿ ಕೆ.(ಬೈಂದೂರು): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಉಡುಪಿ ಜಿಲ್ಲೆ ಬೈಂದೂರು ವಿಧಾನ ಸಭಾ ಕ್ಷೇತ್ರಕ್ಕೆ ಕಳೆದ 5-6 ವರ್ಷಗಳಿಂದ ಪ್ರೌಢ ಶಾಲೆಗೆ ಮಂಜೂರಾತಿ ನೀಡದಿರುವ ಕಾರಣವೇನು;

2) ಬೈಂದೂರು ಕ್ಷೇತ್ರದಲ್ಲಿ ಪ್ರಾಥಮಿಕ ವಿದ್ಯಾರ್ಥಿಗಳ ಸಂಖ್ಯೆ ಅತಿ ಹೆಚ್ಚಾಗಿ 5 ಪ್ರೌಢಶಾಲೆಗಳ ಅವಶ್ಯವಿದ್ದು ಈ ಪ್ರೌಢಶಾಲೆಗಳಿಗೆ ಈ ವರ್ಷದಲ್ಲಿ ಮಂಜೂರಾತಿ ನೀಡಿ ಪ್ರಾರಂಭಿಸಲಾಗುವುದೇ;

3) ಹಾಗಿದ್ದಲ್ಲಿ ಈ ಪ್ರೌಢಶಾಲೆಗಳನ್ನು ತೆರೆಯಲು ಸರಕಾರಕ್ಕಿರುವ ತೊಂದರೆಗಳೇನು;

ಶ್ರೀ ಎಚ್.ವಿಶ್ವನಾಥ್(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

1) ಪ್ರಸ್ತಾವನೆಗಳು ಬಂದಿರುವುದಿಲ್ಲ.

2) ಉದ್ಭವಿಸುವುದಿಲ್ಲ.

3) ಪ್ರಸ್ತಾವನೆಗಳು ಬಂದಲ್ಲಿ ಪರಿಶೀಲಿಸಲಾಗುವುದು.

ಮೈಸೂರು ತಾಲ್ಲೂಕಿನಲ್ಲಿರುವ ಆರೋಗ್ಯ ಸೇವಾ ಕೇಂದ್ರಗಳು.

1800(2420)

ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು; ಹಾಗೂ